ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1924/2019

ಚಾಸಾ:5 ಪ್ರಾಸಾ:4

ದಿನಾಂಕ: 17.09.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಸುಬ್ರಹ್ಮಣ್ಯ |
| ತಂದೆಯ ಹೆಸರು | : | ಬಸವ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ನಿಪಿ-2ರ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಸಾಕ್ಷಿ ಮುಮಾ1ನ್ನು ನೋಡಿ ಗುರುತಿಸಿಲ್ಲ. ನಿಪಿ-3 ಮತ್ತು 4 ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ಸದ್ರಿ ಪೋಟೋಗಳನ್ನು ಎಲ್ಲಿ ತೆಗೆಯಲಾಯಿತು ಎಂದು ಹೇಳಲಾಗುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 06-04-2019 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-6 ರವರ ಸಮಕ್ಷಮ ಮಧ್ಯಾಹ್ನ 3-15 ರಿಂದ 4.00 ಗಂಟೆಯವರೆಗೆ ಪಂಚನಾಮೆ ತಯಾರಿಸಿ ಮುಮಾ1ನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ

ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**